ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೬೧ Volume 161	ಬೆಂಗಳೂರು, ಸೋಮವಾರ, ೨೭, ಜುಲೈ, ೨೦೨೬ (ಶ್ರಾವಣ, ೦೫, ಶಕವರ್ಷ, ೧೯೪೮) BENGALURU, MONDAY, 27, JULY, 2026 (SHRAVANA ,05,ShakaVarsha,1948)	ಸಂಚಿಕೆ ೧೪೫ Issue 145

ಭಾಗ ೩

ಸರ್ಕಾರದ ಆಯಾ ಇಲಾಖೆಗಳ ಮುಖ್ಯಸ್ಥರ ಮತ್ತು ಸ್ಥಳೀಯ ಪ್ರಾಧಿಕಾರಿಗಳಿಗೆ ಸಂಬಂಧಿಸಿದ ಅಧಿಸೂಚನೆಗಳು

ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,

ವಾರ್ಡ್ ನಂ. 20, ಅಂಬಿಕಾ ಲೇಔಟ್, ಸೌತೇಗೌಡನಹಳ್ಳಿ ಗ್ರಾಮ, ಸೂಲಿಬೆಲೆ ರಸ್ತೆ, ಕಸಬಾ ಹೋಬಳಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ–562110

" ಸಾರ್ವಜನಿಕ ಪ್ರಕಟಣೆ "

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(1) ರಡಿ)

ಸಂ. ಬಿಐಎಎಪಿಎ/ಟಿಪಿ/ಮ.ಯೋ.ಪ/01/2013–14/2026–27 **ದಿನಾಂಕ:22–7–2026**

ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ಅನುಮೋದಿತ ಮಹಾಯೋಜನೆಯಲ್ಲಿ ನಗರೀಕರಣ ಎಲ್ಲೆಯ ಹೊರಭಾಗದಲ್ಲಿನ ವ್ಯವಸಾಯ ವಲಯದಲ್ಲಿ ಪ್ರಸ್ತಾಪಿತ ರಸ್ತೆ ಪರಿಚಲನಾ ಜಾಲದ ನಕ್ಷೆಗಳಿಗೆ ಸರ್ಕಾರವು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(1) ರಡಿ ಸರ್ಕಾರದ ಆದೇಶ ಸಂಖ್ಯೆ: ನಅಇ 386 ಬಿಎಂಆರ್ 2025(ಇ), ಬೆಂಗಳೂರು ದಿನಾಂಕ:07/07/2026 ರಂದು ತಾತ್ಕಾಲಿಕ ಅನುಮೋದನೆಯನ್ನು ನೀಡಿರುತ್ತದೆ.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(1) ರಡಿಯಲ್ಲಿ ಸರ್ಕಾರದಿಂದ ತಾತ್ಕಾಲಿಕವಾಗಿ ಅನುಮೋದನೆಯಾಗಿರುವ ನಕ್ಷೆಗಳನ್ನು ಪ್ರಾಧಿಕಾರದ ಕಛೇರಿಯಲ್ಲಿ ವೀಕ್ಷಣೆಗೆ ಇಡಲಾಗಿದೆ. ಹಾಗೂ ಈ ಯೋಜನಾ ಪ್ರಾಧಿಕಾರದ ಜಾಲತಾಣ https://biaapa.tpa.gov.in/ ರಲ್ಲಿ ಸಹಾ ವೀಕ್ಷಿಸಬಹುದಾಗಿದೆ. ಸದರಿ ನಕ್ಷೆಗಳ ಬಗ್ಗೆ ಸಾರ್ವಜನಿಕರು ಸಲಹೆ / ಆಕ್ಷೇಪಣೆಗಳನ್ನು ಈ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ 60 ದಿನಗಳ ಒಳಗಾಗಿ ಪೂರಕ ದಾಖಲೆಗಳೊಂದಿಗೆ ಸಲ್ಲಿಸಬಹುದಾಗಿರುತ್ತದೆ.

ಸಾರ್ವಜನಿಕರು ತಮ್ಮ ಸಲಹೆ / ಆಕ್ಷೇಪಣೆಗಳನ್ನು ಪ್ರಾಧಿಕಾರಕ್ಕೆ ಖುದ್ದಾಗಿ ಅಥವಾ ನೊಂದಣಿ ಅಂಚೆಯ ಮೂಲಕ ಸದಸ್ಯ–ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ವಾರ್ಡ್ ನಂ. 20, ಅಂಬಿಕಾ ಲೇಔಟ್, ಸೌತೇಗೌಡನಹಳ್ಳಿ ಗ್ರಾಮ, ಸೂಲಿಬೆಲೆ ರಸ್ತೆ, ಕಸಬಾ ಹೋಬಳಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ–562110, ಅಥವಾ biaapa.masterplan@gmail.com ಇ–ಮೇಲ್ ಮೂಲಕ ಪ್ರಾಧಿಕಾರಕ್ಕೆ ಸಲ್ಲಿಸಬಹುದಾಗಿದೆ. ನಿಗಧಿತ ಅವಧಿ ಮುಗಿದ ನಂತರ ಸಲ್ಲಿಸುವ ಆಕ್ಷೇಪಣೆ/ಸಲಹೆಗಳನ್ನು ಪರಿಗಣಿಸಲಾಗುವುದಿಲ್ಲ.

ಸಹಿ/–
ಅಧ್ಯಕ್ಷರು
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ.

ಸಹಿ/–
ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು
ಹಾಗೂ ಸದಸ್ಯ ಕಾರ್ಯದರ್ಶಿಗಳು,
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ.

PD-110